ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**17.01.2026** **18.40 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ೬೬ ಕ್ರಿಮಿನಲ್ ಪ್ರಕರಣಗಳಲ್ಲಿ ಪೊಲೀಸರೇ ಶಾಮೀಲು ; ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ**

**೨. ೪೨ ಸಾವಿರದ ೩೪೫ ಬಡ ಕುಟುಂಬಗಳಿಗೆ ಶೀಘ್ರವೇ ಮನೆ ಹಂಚಿಕೆ ; ವಸತಿ ಸಚಿವ ಜಮೀರ್ ಅಹಮ್ಮದ್ ಖಾನ್ ಸ್ಪಷ್ಟನೆ**

**೩. ಬೆಂಗಳೂರಿನಲ್ಲಿ ಮೆಟ್ರೋ ದರ ಏರಿಕೆ ಪ್ರಸ್ತಾವನೆಗೆ ಸಂಸದ ತೇಜಸ್ವಿ ಸೂರ್ಯ ವಿರೋಧ**

**೪. ಗದಗದ ಲಕ್ಕುಂಡಿಯಲ್ಲಿ ಮುಂದುವರಿದ ಉತ್ಖನನ ಕಾರ್ಯ - ಐತಿಹಾಸಿಕ ಕುರುಹುಗಳು ಪತ್ತೆ**

**<><*<><>*><>**

ಸಮಾಜದಲ್ಲಿ ಶಾಂತಿ, ನೆಮ್ಮದಿ ಕಾಪಾಡುವ ಗುರುತರ ಕಾರ್ಯವನ್ನು ಪೊಲೀಸ್ ಇಲಾಖೆ ಪರಿಣಾಮಕಾರಿಯಾಗಿ ನಡೆಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿಂದು ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ತಹಶೀಲ್ದಾರ್ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್ ಸಮರ್ಪಕವಾಗಿ ಕರ್ತವ್ಯ ನಿರ್ವಹಿಸಿದರೆ ಜನರು ನೆಮ್ಮದಿಯಿಂದ ಇರಲು ಸಾಧ್ಯ. ಕೊಲೆ, ಸುಲಿಗೆ, ದರೋಡೆ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿದ್ದು, ಸೈಬರ್ ಅಪರಾಧ, ಮಾದಕ ವ್ಯಸನಗಳ ಚಟುವಟಿಕೆಗಳು ಹೆಚ್ಚಾಗಿದ್ದು, ಅದನ್ನು ಮಟ್ಟ ಹಾಕಲು ಪೊಲೀಸ್ ಇಲಾಖೆ ಮುಂದಾಗುವಂತೆ ಕರೆ ನೀಡಿದ್ದಾರೆ. ಕಳೆದ ಸಾಲಿನಲ್ಲಿ ೬೬ ಕ್ರಿಮಿನಲ್ ಪ್ರಕರಣಗಳಲ್ಲಿ ಪೊಲೀಸರೇ ಭಾಗಿಯಾಗಿರುವುದು ನಾಚಿಕೆಗೇಡಿನ ವಿಷಯ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**<><*<><>*><>**

ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಇದೇ ೨೪ ರಂದು ೪೨ ಸಾವಿರದ ೩೪೫ ಬಡ ಕುಟುಂಬಗಳಿಗೆ ಮನೆ ಹಂಚಿಕೆ ಮಾಡಲಾಗುವುದು ಎಂದು ವಸತಿ ಸಚಿವ ಬಿ.ಝೆಡ್. ಜಮೀರ್ ಅಹ್ಮದ್ ಖಾನ್ ತಿಳಿಸಿದ್ದಾರೆ. ಹುಬ್ಬಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೨೪ ರಂದು ಕಾರ್ಯಕ್ರಮ ಆಯೋಜಿಸಲಾಗಿದೆ. ಈಗಾಗಲೇ ಮೊದಲ ಹಂತದಲ್ಲಿ ೩೬ ಸಾವಿರದ ೭೮೯ ಮನೆಗಳನ್ನು ವಿತರಿಸಲಾಗಿದೆ. ಎರಡನೇ ಹಂತದಲ್ಲಿ ೪೨ ಸಾವಿರದ ೩೪೫ ಮನೆಗಳನ್ನು ಹಂಚಿಕೆ ಮಾಡಲಾಗುತ್ತಿದೆ. ಮೂರನೇ ಹಂತದಲ್ಲಿ ಸುಮಾರು ೩೦ ಸಾವಿರ ಮನೆಗಳನ್ನು ಹಂಚಿಕೆ ಮಾಡುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮೂರನೇ

ಹಂತದ ಮನೆಗಳನ್ನು ಏಪ್ರಿಲ್, ಮೇ ತಿಂಗಳಲ್ಲಿ ವಿತರಿಸಲಾಗುವುದು. ಈಗ ನೀಡುತ್ತಿರುವ ಮನೆಗಳ ಪೈಕಿ ಹುಬ್ಬಳ್ಳಿಯಲ್ಲಿ ೧ ಸಾವಿರದ ೦೮ ಸೇರಿ ಧಾರವಾಡ ಜಿಲ್ಲೆಯಲ್ಲಿ ೨ ಸಾವಿರದ ೭೯೭ ಮನೆ ಹಂಚಿಕೆ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

**ಧ್ವನಿ: ಬಿ.ಝಡ್. ಜಮೀರ್ ಅಹ್ಮದ್ ಖಾನ್**

**<><*<><>*><>**

ಬೆಂಗಳೂರು ಮೆಟ್ರೋ ರೈಲು ನಿಗಮ ಲಿಮಿಟೆಡ್‌ನ ಮೆಟ್ರೋ ದರ ಏರಿಕೆ ಪ್ರಸ್ತಾವನೆಯನ್ನು ಸಂಸದ ತೇಜಸ್ವಿ ಸೂರ್ಯ ವಿರೋಧಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೇಕಡ ೫೦ರಷ್ಟು ಹೆಚ್ಚಿಸುವ ಬಿಎಂಆರ್‌ಸಿಎಲ್ ನಿರ್ಧಾರ ಸ್ವೀಕಾರಾರ್ಹರಲ್ಲ ಎಂದು ಹೇಳಿದ್ದಾರೆ. ದರ ಏರಿಕೆ ಖಂಡಿಸಿ ಪ್ರತಿಭಟನೆಯ ಎಚ್ಚರಿಕೆ ನೀಡಿದ್ದಾರೆ. ಬೆಂಗಳೂರು ಮೆಟ್ರೋ ಈಗ ದೇಶದ ಅತ್ಯಂತ ದುಬಾರಿ ಮೆಟ್ರೋ ಆಗಿದೆ. ರಾಜ್ಯ ಸರ್ಕಾರ ಮತ್ತು ಬಿಎಂಆರ್‌ಸಿಎಲ್ ಜನರ ಮೇಲೆ ಶೋಷಣೆ ನಡೆಸುತ್ತಿದೆ ಎಂದು ದೂರಿದ್ದಾರೆ.

**<><*<><>*><>**

ವೈಚಾರಿಕತೆ ಮತ್ತು ವೈಜ್ಞಾನಿಕತೆಯಿಂದ ಕೂಡಿದ ವಿಚಾರಗಳ ಮೂಲಕ ದೇಶದ ಜನರನ್ನು ಸಿದ್ಧಗೊಳಿಸಬೇಕು ಎಂದು ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ ಮಹದೇವಪ್ಪ ತಿಳಿಸಿದ್ದಾರೆ. ೨೦೨೯ರ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವದ ಬಹುರೂಪಿ ಬಾಬಾಸಾಹೇಬ್-ಸಮತೆಯೆಡೆಗೆ ನಡಿಗೆ ಎಂಬ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಬಂದು ೭೬ ವರ್ಷವಾದರೂ ಇನ್ನು ಸಾಮಾಜಿಕ ಬಹಿಷ್ಕಾರ ಹಾಗೂ ಮರ್ಯಾದ ಹತ್ಯೆ ನಡೆಯುತ್ತಲೇ ಇದೆ. ಇದಕ್ಕಾಗಿಯೆ ಒಂದು ಕಾಯ್ದೆ ಮಾಡಬೇಕಾಗಿದೆ ಎಂದು ಪ್ರತಿಪಾದಿಸಿದ್ದಾರೆ. ವಿಧಾನ ವಿಧಾನ ಪರಿಷತ್ ಸದಸ್ಯ ಡಾ: ಕೆ ಶಿವಕುಮಾರ್ ಮಾತನಾಡಿ ಜಾತಿ ವ್ಯವಸ್ಥೆಯನ್ನು ಸಂಪೂರ್ಣವಾಗಿ ಕೊನೆಗೊಳಿಸುವ ಕಡೆ ಚಿಂತಿಸಬೇಕು. ಆಗ ಮಾತ್ರ ಸಮಾಜದಲ್ಲಿ ಶಾಂತಿ ನೆಮ್ಮದಿ ನೆಲೆಯಾಗಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಕೇಂದ್ರ ಪುರಸ್ಕೃತ ಯೋಜನೆಯಡಿ ಬಿಡುಗಡೆಯಾಗುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಗುಣಮಟ್ಟದ ಕಾಮಗಾರಿ ಕೈಗೊಂಡು ನಿಗದಿತ ಕಾಲಾವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಸಂಸದ ರಮೇಶ ಜಿಗಜಿಣಗಿ ಸೂಚಿಸಿದ್ದಾರೆ. ವಿಜಯಪುರದಲ್ಲಿ ನಡೆದ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ೩ನೇ ತ್ರೈಮಾಸಿಕ ದಿಶಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ವೈಯಕ್ತಿಕ ಶೌಚಾಲಯ ಶೇಕಡ ೬೨ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಪ್ರಸಕ್ತ ಸಾಲಿನ ಕನಿಷ್ಠ ಬೆಂಬಲಬೆಲೆ ಯೋಜನೆಯಡಿ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಮಾನದಂಡಗಳನ್ವಯ ಎಫ್‌ಎಕ್ಯೂ ಗುಣಮಟ್ಟದ ಆಹಾರಧಾನ್ಯ ಖರೀದಿ ಪ್ರಮಾಣ ಮತ್ತು ದರ ನಿಗದಿಪಡಿಸಿ ಮುಂಗಾರು ಋತುವಿನಲ್ಲಿ ಬಿಳಿಜೋಳ ರೈತರಿಂದ ನೇರವಾಗಿ ಖರೀದಿಸಲಾಗುತ್ತದೆ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದ್ದಾರೆ. ಮಾರ್ಚ್ ೩೧ ರವರೆಗೆ ಪ್ರತಿ ಎಕರೆಗೆ ೧೫ ಕ್ವಿಂಟಾಲ್‌ನಂತೆ ಗರಿಷ್ಠ ೧೫೦ ಕ್ವಿಂಟಾಲ್ ಬಿಳಿಜೋಳ ೩ ಸಾವಿರದ ೬೯೯ ರೂಪಾಯಿ ಹಾಗೂ ಮಾಲ್ದಂಡಿ ಜೋಳವನ್ನು ೩ ಸಾವಿರದ ೭೪೯ ರೂಪಾಯಿಯಂತೆ ಖರೀದಿಸಲಾಗುತ್ತದೆ. ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಎಪಿಎಂಸಿ ಯಾರ್ಡ್ ಮತ್ತು ಕೃಷಿ ಪತ್ತಿನ ಸಹಕಾರಿ ಸಂಘಗಳಲ್ಲಿ ಖರೀದಿ ಕೇಂದ್ರಗಳನ್ನು ಆರಂಭಿಸಲಾಗಿದ್ದು ಎಲ್ಲಾ ರೈತರು ಸದುಪಯೋಗಪಡೆದುಕೊಳ್ಳಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಬಳಿ ನಡೆಯುತ್ತಿರುವ ಉತ್ಖನನ ಕಾರ್ಯ ಎರಡನೇಯ ದಿನವಾದ ಇಂದು ಕೂಡ ನಡೆಯಿತು. ಇದೇ ೧೦ ರಂದು ಮನೆ ನಿರ್ಮಾಣಕ್ಕಾಗಿ ಅಡಿಪಾಯ ಹಾಕುತ್ತಿರುವ ಸಂದರ್ಭದಲ್ಲಿ ೪೬೬ ಗ್ರಾಂ ಚಿನ್ನದ ವಿವಿಧ ಆಭರಣಗಳು ಪತ್ತೆಯಾದ ಹಿನ್ನೆಲೆಯಲ್ಲಿ ಗದಗ ಜಿಲ್ಲಾಡಳಿತ, ಭಾರತೀಯ ಪುರಾತತ್ವ ಇಲಾಖೆ ಮತ್ತು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಉತ್ಖನನ ಕಾರ್ಯ ಆರಂಭಿಸಲಾಗಿದೆ. ಈ ವೇಳೆ ಕೆಲವೊಂದು ಪುರಾತತ್ವ ವಸ್ತುಗಳು ಮತ್ತು ಮಣ್ಣಿನ ಮಡಿಕೆ ಚೂರುಗಳು ಪತ್ತೆಯಾಗಿವೆ. ಉತ್ಖನನ ಕಾರ್ಯ ಕಾರ್ಯ ಪೂರ್ಣಗೊಳ್ಳದ ಹೊರತು ದೊರೆತ ವಸ್ತುಗಳ ಕುರಿತು ಸಂಪೂರ್ಣ ಮಾಹಿತಿ ಹೇಳಲು ಆಗುವುದಿಲ್ಲ ಎಂದು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೆರಿ ತಿಳಿಸಿದ್ದಾರೆ.

<><*<><>*><>

ಮತದಾರರ ಪಟ್ಟಿ ಪರಿಷ್ಕರಣೆಯನ್ನು ಎಚ್ಚರಿಕೆಯಿಂದ ಕೈಗೊಳ್ಳಬೇಕೆಂದು ದಾವಣಗೆರೆ ದಕ್ಷಿಣ ಮತದಾರರ ಪಟ್ಟಿ ವಿಶೇಷ ವೀಕ್ಷಕ ಡಾ.ಶಮ್ಲಾ ಇಕ್ಬಾಲ್ ಸೂಚನೆ ನೀಡಿದ್ದಾರೆ. ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ನಡೆದ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಭಾವಚಿತ್ರವಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಹೊಸ ಮತದಾರರ ಸೇರ್ಪಡೆಗೆ ಕಾಲೇಜುಗಳಲ್ಲಿ ಜಾಗೃತಿ ಮೂಡಿಸುವಂತೆ ಸಲಹೆ ನೀಡಿದ್ದಾರೆ.

<><*<><>*><>

ಗ್ಯಾರಂಟಿ ಯೋಜನೆಯು ರಾಜ್ಯದ ಬಡವರು, ಮಹಿಳೆಯರು ಮತ್ತು ಯುವ ಜನರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಅಭಿವೃದ್ಧಿಗೆ ಸಹಕಾರಿಯಾಗಿದೆ ಎಂದು ಗ್ಯಾರಂಟಿ ಯೋಜನೆಗಳ ರಾಜ್ಯ

ಉಪಾಧ್ಯಕ್ಷ ಎಸ್.ಆರ್.ಮೆಹರೋಜ್ ಖಾನ್ ತಿಳಿಸಿದ್ದಾರೆ. ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಐದು ಗ್ಯಾರಂಟಿ ಯೋಜನೆ ಜಾರಿಯಿಂದ ಶೇಕಡ ೨೪ ರಷ್ಟು ಜಿಡಿಪಿ ದರ ಹೆಚ್ಚಳವಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಚಾಲುಕ್ಯ ಉತ್ಸವ-೨೦೨೬ರ ಅಂಗವಾಗಿ ಚಾಲುಕ್ಯರ ಗತವೈಭವವನ್ನು ಸಾರುವ ನಿಟ್ಟಿನಲ್ಲಿ ಹಮ್ಮಿಕೊಂಡ ಚಾಲುಕ್ಯ ರಥಯಾತ್ರೆಗೆ ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಇಂದು ಚಾಲನೆ ನೀಡಿದರು.

<><*<><>*><>

ರಾಮನಗರ ಜಿಲ್ಲೆಯ ಎಲ್ಲಾ ಅಸಂಘಟಿತ ವಲಯ ಕಾರ್ಮಿಕರಿಗೆ ಪಿಂಚಣಿ ಯೋಜನೆ ಜಾರಿಗೊಳಿಸುವ ನಿಟ್ಟಿನಲ್ಲಿ ನಗರ ಪ್ರದೇಶಗಳಲ್ಲಿ ೨೦೨೬ರ ಫೆಬ್ರವರಿ ೧೬ರವರೆಗೆ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಫೆಬ್ರವರಿ ೧೬ ರಿಂದ ಮಾರ್ಚ್ ೧೫ರ ವರೆಗೆ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಪಿಂಚಣಿ ಯೋಜನೆಯಡಿ ಕಾರ್ಮಿಕರನ್ನು ನೋಂದಾಯಿಸಲು ವಿಶೇಷ ನೋಂದಣಿ ಅಭಿಯಾನ ಶಿಬಿರ ಆಯೋಜಿಸಲಾಗಿದೆ.

<><*<><>*><>

ಕರ್ನಾಟಕ ಕ್ರೀಡಾಕೂಟದ ಪುರುಷರ ಫುಟ್ಬಾಲ್‌ನಲ್ಲಿ ಕೊಡಗು ಮತ್ತು ಉತ್ತರ ಕನ್ನಡ ತಂಡಗಳು ಎ ಗ್ರೂಪ್‌ನಿಂದ ಸೆಮಿಫೈನಲ್ ಪ್ರವೇಶಿಸಿವೆ. ಬಿ ಗ್ರೂಪ್‌ನಲ್ಲಿ ಮೈಸೂರು ತಂಡ ೮-೦ ಗೋಲುಗಳಿಂದ ದಾವಣಗೆರೆ ತಂಡವನ್ನ ಸೋಲಿಸಿ ಮುನ್ನಡೆ ಸಾಧಿಸಿದೆ. ಮಹಿಳೆಯರ ಫಾಯಿಲ್ ಫೆನ್ಸಿಂಗ್ ಸ್ಪರ್ಧೆಯಲ್ಲಿ ಬೆಂಗಳೂರು ಗ್ರಾಮಾಂತರದ ಸಯೆದಾ ಇಫ್ತಾಖರ್ ಬಾನು ಸ್ವರ್ಣ ಪದಕ ಗೆದ್ದುಕೊಂಡಿದ್ದಾರೆ. ಮಹಿಳೆಯರ ಸೇಬರ್ ಫೆನ್ಸಿಂಗ್‌ನಲ್ಲಿ ಬೆಂಗಳೂರು ನಗರದ ದೀಕ್ಷಾ ಎಲ್ ಗೌಡ ಬಂಗಾರದ ಪದಕ ಗೆದ್ದಿದ್ದಾರೆ. ಪುರುಷರ ಫಾಯಿಲ್ ಫೆನ್ಸಿಂಗ್‌ನಲ್ಲಿ ಸಯ್ಯದ್ ಬಹುದ್ದೀನ್ ಚಿನ್ನಕ್ಕೆ ಮುತ್ತಿಕ್ಕಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**